## DECEMBER 21, 2025
## ALL INDIA RADIO- DHARWAD
## PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಲಾಭದಾಯಕ ಕೃಷಿಯ ಮೂಲಕ ಆರ್ಥಿಕ ಸ್ವಾವಲಂಬನೆ: ಸರ್ಕಾರದಿಂದ ಹಲವು ಕ್ರಮ–ಮುಖ್ಯಮಂತ್ರಿ.

- ರಾಸಾಯನಿಕ ಗೊಬ್ಬರ ಬಳಕೆಯಿಂದ ಕಡಿಮೆಯಾಗುತ್ತಿರುವ ಮಣ್ಣಿನ ಸಾರ ಉಳಿಸಲು ಕಾಂಪೋಸ್ಟ್–ಸಗಣಿ ಗೊಬ್ಬರ ಬಳಕೆಗೆ ಸಚಿವ ಜಾರ್ಜ್ ಸಲಹೆ.

- ಪ್ರಸಕ್ತ ಸಾಲಿನ ಬಜೆಟ್ ಘೋಷಣೆಯಂತೆ 2 ಸಾವಿರ ಬಸ್‌ಗಳ ಖರೀದಿಗೆ ಟೆಂಡರ್ ಪ್ರಕ್ರಿಯೆ ಜಾರಿ– ಸಾರಿಗೆ ಸಚಿವರಿಂದ ಮಾಹಿತಿ.

- ಇಂದಿನಿಂದರಾಜ್ಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ: 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ.

ಈಗ ವಾರ್ತೆಗಳ ವಿವರ

*******

ಕೃಷಿಯನ್ನು ಲಾಭದಾಯಕವಾಗಿಸಿ, ರೈತರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸಲು ರಾಜ್ಯ ಸರಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದ್ದಾರೆ. ಬೆಳಗಾವಿ, ಬಾಗಲಕೋಟ, ವಿಜಯಪುರ, ಕಲಬುರಗಿ ಮತ್ತು ಮಂಡ್ಯ ಜಿಲ್ಲೆಗಳ ಕಬ್ಬು ಬೆಳೆಯುವ ಪ್ರದೇಶದಲ್ಲಿ ಮಣ್ಣಿನ ಆರೋಗ್ಯ ಮತ್ತು ನೀರಿನ ಸಮಗ್ರ ನಿರ್ವಹಣೆ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ರಸಗೊಬ್ಬರ ಬಳಕೆಯಿಂದ ಹೆಚ್ಚಿನ ಇಳುವರಿ ಬರುತ್ತದೆ ಎಂಬ ತಪ್ಪು ಕಲ್ಪನೆಯಿಂದ ರೈತರು ಹೊರಬರಬೇಕಿದೆ. ರಸಗೊಬ್ಬರ ಬಳಕೆ ಕಡಿಮೆ ಮಾಡಿ, ಭೂಮಿಯ ಫಲವತ್ತತೆಯನ್ನು ಉಳಿಸಿಕೊಳ್ಳಬೇಕು ಎಂದರು. ಕೃಷಿಯಲ್ಲಿ ತಂತ್ರಜ್ಞಾನ ಅಳವಡಿಸಿಕೊಳ್ಳುವುದರ ಮೂಲಕ ರೈತರು ಉತ್ತಮ ಇಳುವರಿ ಜೊತೆಗೆ ಹೆಚ್ಚಿನ ಆದಾಯ ಪಡೆಯಲು ಮುಂದಾಗಬೇಕು. ಈ ನಿಟ್ಟಿನಲ್ಲಿ ರಾಜ್ಯ ಸರಕಾರ ಸಬ್ಸಿಡಿ ಮೂಲಕ ಹೊಸ ಯಂತ್ರೋಪಕರಣಗಳನ್ನು ವಿತರಿಸುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು.

*******

ರಾಸಾಯನಿಕ ಗೊಬ್ಬರಗಳ ಅತೀ ಬಳಕೆಯಿಂದ ಮಣ್ಣಿನ ಸತ್ವ ಕಳೆದುಹೋಗುತ್ತಿದ್ದು, ಕಾಂಪೋಸ್ಟ್ ಮತ್ತು ಸಗಣಿ ಗೊಬ್ಬರ ಬಳಸಿ ಮಣ್ಣಿನ ಸಾರ ಹೆಚ್ಚಿಸುವ ಕಾರ್ಯ ಕೈಗೊಳ್ಳಬೇಕಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಸಲಹೆ ನೀಡಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಬಾಳೆಹೊನ್ನೂರಿನ ಕೇಂದ್ರೀಯ ಕಾಫಿ ಸಂಶೋಧನಾ ಸಂಸ್ಥೆಯ ಶತಮಾನೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಮಣ್ಣಿನ ಸತ್ವ ಹೆಚ್ಚಿಸುವ ಮೂಲಕ ಕಾಫಿ ಮತ್ತಿತರ ಕೃಷಿ ಸಂಬಂಧಿತ ಬೆಳೆಗಳ ಉತ್ಪಾದನೆ ಹೆಚ್ಚಿಸಲು ಕ್ರಮ ಕೈಗೊಳ್ಳಬೇಕಿದೆ ಎಂದರು. ಕುಸುಮ ಸಿ. ಯೋಜನೆಯಡಿ ರೈತರ ನೀರಾವರಿ ಪಂಪ್‌ಸೆಟ್‌ಗಳಿಗೆ ಅವು ಇರುವಲ್ಲೇ ಸೋಲಾರ್ ಮೂಲಕ ವಿದ್ಯುತ್ ಒದಗಿಸಲಾಗುತ್ತಿದೆ. ಈ ಯೋಜನೆಯಲ್ಲಿ ಬಾಕಿ ಇದ್ದ ಸುಮಾರು 4,50,000 ಅರ್ಜಿಗಳಲ್ಲಿ ಈಗಾಗಲೇ ಸುಮಾರು 3,50,000 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

*******

ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಘೋಷಿಸಿದಂತೆ 2 ಸಾವಿರ ಬಸ್‌ಗಳ ಖರೀದಿಗೆ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ. ವಿಜಯಪುರದಲ್ಲಿ ನಡೆದ ನೂತನ ನಗರ ಸಾರಿಗೆ ವಾಹನಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮುಂದಿನ ಎರಡು ತಿಂಗಳಲ್ಲಿ 20 ನಾನ್ ಎಸಿ ಸ್ಲೀಪರ್, 20 ಎಸಿ ಸ್ಲೀಪರ್ ಹಾಗೂ 16 ಎ.ಸಿ.ಸೀಟರ್ ಸೇರಿದಂತೆ ಒಟ್ಟು 56 ಹೊಸ ವಾಹನಗಳ ಖರೀದಿಗೆ ಆದೇಶ ಹೊರಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ಕೆಕೆಆರ್ಟಿಸಿಗೆ 400 ಬಸ್‌ಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿದ್ದು, ಮುಂದಿನ ಎರಡ್ಮೂರು ತಿಂಗಳಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದರು. ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಅನುಕಂಪದ ಆಧಾರದ ಮೇಲೆ ಒಂದು ಸಾವಿರ ಹಾಗೂ ನೇರ ನೇಮಕಾತಿ ಮೂಲಕ 9 ಸಾವಿರ ಸೇರಿದಂತೆ ಹತ್ತು ಸಾವಿರ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳಲಾಗಿದೆ ಎಂದು ಸಚಿವರು ಹೇಳಿದರು.

*******

ರಾಜ್ಯದ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಇಂದಿನಿಂದರಾಜ್ಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ನಡೆಯಲಿದೆ. 5 ವ ಁದವರೆಗಿನ ಎಲ್ಲ ಮಕ್ಕಳಿಗೂ ತಪ್ಪದೆ 2 ಹನಿ ಲಸಿಕೆ ಹಾಕಿಸಬೇಕು ಎಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಕೋರಿದ್ದಾರೆ. ರಾಜ್ಯಾದ್ಯಂತ 33 ಸಾವಿರದ 258 ಬೂತ್‌ಗಳಲ್ಲಿ 5 ವ ಁದೊಳಗಿನ ಸುಮಾರು 62 ಲಕ್ಷ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಆಸ್ಪತ್ರೆ, ಅಂಗನವಾಡಿಗಳ ್ಟೇ ಅಲ್ಲದೆ ರೈಲ್ವೆ ಸ್ಟೇ ಁನ್, ಬಸ್ ನಿಲ್ದಾಣ ಹಾಗೂ ಗುಡ್ಡಗಾಡು ಪ್ರದೇಶಗಳಲ್ಲೂ ಲಸಿಕಾ ತಂಡಗಳು ಕಾರ್ಯನಿರ್ವಹಿಸಲಿವೆ ಎಂದು ಸಚಿವ ದಿನೇಶ ಗುಂಡೂರಾವ್ ತಿಳಿಸಿದ್ದಾರೆ.

ಧ್ವನಿ–ದಿನೇಶ ಗುಂಡೂರಾವ್– 33 ಸೆಕೆಂಡ್ಸ್

*******

ಪಲ್ಸ್ ಪೊಲಿಯೊ ಅಭಿಯಾನದ ಅಂಗವಾಗಿ ರಾಜ್ಯದ ವಿವಿಧೆಡೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಭಿಯಾನದ ಪೂರ್ವಭಾವಿಯಾಗಿ ವಿಜಯನಗರದಲ್ಲಿ ಜಿಲ್ಲಾ ಮಟ್ಟದ ರಾಷ್ಟ್ರೀಯ ಪಲ್ಸ್ ಪೋಲಿಯೋ 2025 ರ ಜನ ಜಾಗೃತಿ ಜಾಥಾ ಕಾರ್ಯಕ್ರಮ ಅಯೋಜಿಸಲಾಗಿತ್ತು. ಜಿಲ್ಲಾ ಆರೋಗ್ಯಾಧಿಕಾರಿ ಡಾ. ಶಂಕರ್ ನಾಯ್ಕ್ ಜಾಥಾಕ್ಕೆ ಚಾಲನೆ ನೀಡಿದರು. ಹುಬ್ಬಳ್ಳಿಯ ಎಸ್.ಎಮ್.ಕೃ ್ಣ ನಗರದಲ್ಲಿ ಇಂದು ಬೆಳಿಗ್ಗೆ 10 ಗಂಟೆಗೆ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಪ್ರಸಾದ ಅಬ್ಬಯ್ಯ ಹಾಗೂ ಪಾಲಿಕೆ ಸದಸ್ಯೆ ಫಾಮೀದಾ ಕಾರಡಗಿ ಚಾಲನೆ ನೀಡಲಿದ್ದಾರೆ. ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, 5 ವ ್ಷದೊಳಗಿನ ಸುಮಾರು 25 ಸಾವಿರದ 382 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ಸಿ.ಸುಗುಣ ತಿಳಿಸಿದ್ದಾರೆ. ಬಳ್ಳಾರಿ ಜಿಲ್ಲೆಯಲ್ಲಿ ಐದು ವ ್ಷದೊಳಗಿನ 1,89,745 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಇದಕ್ಕಾಗಿ ಒಟ್ಟು 920 ಬೂತ್ ಮಟ್ಟದ ಲಸಿಕಾ ತಂಡಗಳನ್ನು ರಚಿಸಲಾಗಿದೆ. 49 ಸಂಚಾರಿ ತಂಡಗಳನ್ನು ನೇಮಿಸಲಾಗಿದೆ. 1,968 ಲಸಿಕಾ ಸಿಬ್ಬಂದಿ, 984 ತಂಡಗಳು ಮನೆ ಮನೆಗೆ ಭೇಟಿ ನೀಡಲಿವೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಮಾಹಿತಿ ನೀಡಿದ್ದಾರೆ.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–52 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಕೊಪ್ಪಳ ಜಿಲ್ಲೆಯ ಐತಿಹಾಸಿಕ ಹನುಮನು ಉದಯಿಸಿದ ನಾಡು ಅಂಜನಾದ್ರಿ ಬೆಟ್ಟಕ್ಕೆ ಕೇಂದ್ರ ರಾಷ್ಟ್ರೀಯ ಹೆದ್ದಾರಿ ಮತ್ತು ಭೂ ಸಾರಿಗೆ ಇಲಾಖೆ ರಾಜ್ಯ ಸಚಿವ ಹ ್ಷ ಮಲ್ಹೋತ್ರ ಭೇಟಿ ನಿನ್ನೆ ನೀಡಿದರು. ಅಂಜನಾದ್ರಿ ಬೆಟ್ಟದ 575 ಮೆಟ್ಟಿಲುಗಳನ್ನು ಹತ್ತಿ ಅವರು ಆಂಜನೇಯ ದರ್ಶನ ಪಡೆದರು. ಈ ಸಂದರ್ಭದಲ್ಲಿ ಹಿರಿಯ ಅಧಿಕಾರಿಗಳು ಮತ್ತು ಗಣ್ಯರು ಉಪಸ್ಥಿತರಿದ್ದರು

*******

ಎಂ.ಐ.ಡಿ.ಎಫ್– ಹಸ್ತಪ್ರತಿ ಮತ್ತು ಶಿಲಾಶಾಸನಗಳ ಗಣಕೀಕರಣ ಫೌಂಡೇಶನ್ ಅನುದಾನದಲ್ಲಿ, ಇತಿಹಾಸ ತಜ್ಞ ದಿವಂಗತ ಡಾಕ್ಟರ ಶ್ರೀನಿವಾಸ ರಿತ್ತಿ ಸ್ಮಾರಕ ಶಾಸನಶಾಸ್ತ್ರ ಸಂಶೋಧನಾ ಕೇಂದ್ರ– ಪ್ರತ್ನಕೀರ್ತಿ ಇಂದು ಧಾರವಾಡದ ನವೋದಯ ನಗರದಲ್ಲಿ ಆರಂಭಗೊಳ್ಳಲಿದೆ. ಬೆಂಗಳೂರು ಮಿಥಿಕ್ ಸೊಸಾಯಿಟಿ, ಸಂಶೋಧನಾ ವಿಭಾಗದ ನಿರ್ದೇಶಕ ಡಾಕ್ಟರ ಶ್ರೀನಿವಾಸ ಪಾಡಿಗಾರ ಕೇಂದ್ರ ಉದ್ಘಾಟಿಸಲಿದ್ದು, ಶಾಸನಶಾಸ್ತ್ರ ಸಂಶೋಧನಾ ಕೇಂದ್ರ –ಪ್ರತ್ನಕೀರ್ತಿ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಕೇಂದ್ರದ ನಿರ್ದೇಶಕ ಕೆಯೂರ್ ಕರಗುದರಿ ಅವರು..

ಧ್ವನಿ–ಕೆಯೂರ್ ಕರಗುದರಿ–46 ಸೆಕೆಂಡ್ಸ್

*******

ಮುಂದಿನ ಹತ್ತು ವರ್ಷಗಳಲ್ಲಿ ಇಡೀ ದೇಶವನ್ನು ಬಾಲ್ಯ ವಿವಾಹ ಮುಕ್ತ ಭಾರತ ಮಾಡಲು ಅಭಿಯಾನ ಹಮ್ಮಿಕೊಳ್ಳುವಂತೆ ಎಲ್ಲ ರಾಜ್ಯಗಳು, ಜಿಲ್ಲೆಗಳಿಗೆ ಕೇಂದ್ರ ಸರ್ಕಾರ ಸೂಚಿಸಿದೆ ಎಂದು ಧಾರವಾಡ ಜಿಲ್ಲಾ ಬಾಲ್ಯ ವಿವಾಹ ನಿಷೇಧ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದ್ದಾರೆ. ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಡೆದ ಬಾಲ್ಯ ವಿವಾಹ ಮುಕ್ತ ಭಾರತ ಅಭಿಯಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಮಾತನಾಡಿದ ಅವರು, ಧಾರವಾಡ ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿ ಮಾಡುವ ಪೂರ್ವದಲ್ಲಿ ಜಿಲ್ಲೆಯ ಎಲ್ಲ ಗ್ರಾಮಗಳನ್ನು ಬಾಲ್ಯ ವಿವಾಹ ಮುಕ್ತ ಗ್ರಾಮಗಳನ್ನಾಗಿ ಘೋಷಿಸಬೇಕು. ಅದಕ್ಕಾಗಿ ಹಮ್ಮಿಕೊಂಡಿರುವ ನೂರು ದಿನಗಳ ಮಕ್ಕಳ ಜಾಗೃತಿ ಕಾರ್ಯಕ್ರಮಗಳು ಜಿಲ್ಲೆಯ ಪ್ರತಿ ಮನೆಗಳಿಗೆ ತಲುಪಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಲಾಭದಾಯಕ ಕೃಷಿಯ ಮೂಲಕ ಆರ್ಥಿಕ ಸ್ವಾವಲಂಬನೆ: ಸರ್ಕಾರದಿಂದ ಹಲವು ಕ್ರಮ–ಮುಖ್ಯಮಂತ್ರಿ.

ರಾಸಾಯನಿಕ ಗೊಬ್ಬರ ಬಳಕೆಯಿಂದ ಕಡಿಮೆಯಾಗುತ್ತಿರುವ ಮಣ್ಣಿನ ಸಾರ ಉಳಿಸಲು ಕಾಂಪೋಸ್ಟ್–ಸಗಣಿ ಗೊಬ್ಬರ ಬಳಕೆಗೆ ಸಚಿವ ಜಾರ್ಜ್ ಸಲಹೆ.

ಪ್ರಸಕ್ತ ಸಾಲಿನ ಬಜೆಟ್ ಘೋಷಣೆಯಂತೆ 2 ಸಾವಿರ ಬಸ್‌ಗಳ ಖರೀದಿಗೆ ಟೆಂಡರ್ ಪ್ರಕ್ರಿಯೆ ಜಾರಿ– ಸಾರಿಗೆ ಸಚಿವರ ಮಾಹಿತಿ.

ಇಂದಿನಿಂದರಾಜ್ಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ: 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********